**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ: 1386/2026</u>**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

**ಆರೋಪಿ** : ಶ್ರೀಮತಿ.ಗೌರಿ

:: **<u>ಆಪಾದನೆ</u>** ::

**ಶ್ರೀಮತಿ.ಶ್ರುತಿ ಶ್ರೀ. ಎಸ್. ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿಯಾದಃ-

ಶ್ರೀಮತಿ.ಗೌರಿ ಬಿನ್ ಮಹದೇವಶೆಟ್ಟಿ
ವಯಸ್ಸು ಸುಮಾರು 35 ವರ್ಷ,
ವಾಸಃ ಇಮ್ಮಾವುಹುಂಡಿ ಗ್ರಾಮ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.

ನಿವಾಸಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ದಿನಾಂಕ 24.05.2026 ರಂದು ಸಂಜೆ 05.00 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಇಮ್ಮಾವುಹುಂಡಿ ಗ್ರಾಮದಲ್ಲಿ ಆರೋಪಿಯಾದ ನೀವು ನಿಮ್ಮ ಮನೆಯ ಪಕ್ಕದಲ್ಲಿರುವ ಸಾರ್ವಜನಿಕ ರಸ್ತೆಯಲ್ಲಿ ಯಾವುದೇ ಪರವಾನಿಗೆ ಇಲ್ಲದೇ ಅಕ್ರಮವಾಗಿ ಮದ್ಯ ಸೇವಿಸಲು ಅವಕಾಶ ಮಾಡಿಕೊಟ್ಟು, ಸಾರ್ವಜನಿಕರಿಗೆ ಮದ್ಯವನ್ನು ಕುಡಿಯಲು ಪ್ರಚೋದನೆ ನೀಡಿದ್ದು, ಆ ಮೂಲಕ ಆರೋಪಿಯಾದ ನೀವು ಅಬಕಾರಿ ಕಾಯ್ದೆ ಕಲಂ-15(ಎ) ಮತ್ತು 32(3) ರಂತೆ ಶಿಕ್ಷಾರ್ಹ ಅಪರಾಧ ಎಸಗಿದ್ದೀರೆಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆಃ1- ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ ?

ಆರೋಪಿಯ ಉತ್ತರಃ

ಪ್ರಶ್ನೆ:2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ ?

ಆರೋಪಿಯ ಉತ್ತರಃ

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ಆಪಾದನೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಯು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 08.06.2026

**(ಶೃತಿ ಶ್ರೀ. ಎಸ್.)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ನಂಜನಗೂಡು.